**ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಎಂ.ನಾಗರಾಜು ಇವರು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿರುವ ವಿಷಯಕ್ಕೆ ಉತ್ತರ.**

**ಪ್ರಶ್ನೆ:**

**ಹೊಸಕೋಟೆ ಹೆದ್ದಾರಿ ಬದಿಯಲ್ಲಿ ಕೆ.ಐ.ಎ.ಡಿ.ಬಿ ಕೈಗಾರಿಕಾ ಅಭಿವೃದ್ಧಿ ಮಂಡಳಿಗೆ ಸೇರಿದ ಜಾಗದಲ್ಲಿ ಸುರಿದಿರುವ ಕಸದ ರಾಶಿಯಿಂದ ಸುತ್ತಮುತ್ತಲಿನ ಜನರಿಗೆ ಅನಾರೋಗ್ಯ ಉಂಟಾಗುತ್ತಿರುವ ಕುರಿತು.**

**ಉತ್ತರ:-**

ಬೆಂಗಳೂರು ಗ್ರಾಮಾಂತರ ಜಿಲ್ಲೆ, ಹೊಸಕೋಟೆ ತಾಲ್ಲೂಕು, ಕಸಬಾ ಹೋಬಳಿ, ಚಿಕ್ಕಹುಲ್ಲೂರು ಗ್ರಾಮದ ಸರ್ವೆ ನಂ.25 ರಲ್ಲಿ ಒಟ್ಟು 176-16 ಎಕರೆ ಜಮೀನಿಗೆ ದಿನಾಂಕ: 14.06.2010 ರಂದು ಕಲಂ 28 (1) ರ ಸರ್ಕಾರದ ಅಧಿಸೂಚನೆ ಹೊರಡಿಸಲಾಗಿರುತ್ತದೆ. ಸದರಿ ಜಮೀನಿನ ಪೈಕಿ ಸರ್ಕಾರಿ ಜಮೀನು 167.04 ಎಕರೆಗಳನ್ನು ದಿನಾಂಕ: 08.05.2015 ರಂದು ಕಲಂ 28 (8)ರಡಿಯಲ್ಲಿ ಮಂಡಳಿಗೆ ಹಸ್ತಾಂತರಿಸಲಾಗಿರುತ್ತದೆ.

ಆದಾಗ್ಯೂ, ಗ್ರಾಮಸ್ಥರು ಸದರಿ ಜಮೀನಿನಲ್ಲಿ ಭೂ ಮಂಜೂರಾತಿಗಾಗಿ Form 50, 53 ರಲ್ಲಿ ಅರ್ಜಿ ಸಲ್ಲಿಸಿದ್ದು, ಇದರ ಬಗ್ಗೆ ನ್ಯಾಯಾಲಯದಲ್ಲಿ ಪ್ರಕರಣಗಳು ಬಾಕಿ ಇರುವುದರಿಂದ ಮಂಡಳಿ ವತಿಯಿಂದ ಸದರಿ ಪ್ರದೇಶವನ್ನು ಭೌತಿಕವಾಗಿ ಸ್ವಾಧೀನ ಪಡೆಯಲು ಸಾಧ್ಯವಾಗಿರುವುದಿಲ್ಲ.

ಇನ್ನು ಈ ಪ್ರದೇಶವು ಕೆಐಎಡಿಬಿಯ ಸ್ವಾಧೀನದಲ್ಲಿ ಇಲ್ಲದೇ ಇರುವುದರಿಂದ ಸದರಿ ಪ್ರದೇಶದಲ್ಲಿ ತ್ಯಾಜ್ಯವನ್ನು ಅಕ್ರಮವಾಗಿ ರಾತ್ರಿ ಸಮಯದಲ್ಲಿ ಸುರಿಯುತ್ತಿರುವ ಬಗ್ಗೆ ಕ್ರಮ ಕೈಗೊಳ್ಳಲು ಮಂಡಳಿಯು ಸೂಕ್ತ ಪ್ರಾಧಿಕಾರವಾಗಿರುವುದಿಲ್ಲ. ಸ್ಥಳೀಯ ಸಂಸ್ಥೆಗಳಾದ ಚಿಕ್ಕಹುಲ್ಲೂರು ಗ್ರಾಮ ಪಂಚಾಯಿತಿ ಹಾಗೂ ಪೊಲೀಸ್ ಠಾಣಾಧಿಕಾರಿಗಳು ಕ್ರಮ ವಹಿಸಬೇಕಾಗಿದ್ದು, ಈ ಬಗ್ಗೆ, ಮಂಡಳಿಯ ವತಿಯಿಂದಲೂ ಅಗತ್ಯ ಕ್ರಮ ವಹಿಸಲಾಗುವುದು.

**ಸಂಖ್ಯೆ: ಸಿಐ 144 ಐಎಪಿ 2025**

**(ಎಂ.ಬಿ.ಪಾಟೀಲ)**
**ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು.**